# Bangalore
# Regional News
# 14.04.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಬೆಂಗಳೂರಿನಲ್ಲಿ ಅತಿ ಎತ್ತರದ ಅಂಬೇಡ್ಕರ್ ಪ್ರತಿಮೆ ಸ್ಥಾಪನೆ– ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ
2. ಹುಬ್ಬಳ್ಳಿ ಎನ್‌ಕೌಂಟರ್ ಪ್ರಕರಣ; ತನಿಖೆಗೆ ಆದೇಶಿಸಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್
3. ಮುಂದಿನ ಶೈಕ್ಷಣಿಕ ವರ್ಷಕ್ಕೆ ಪಠ್ಯ ಪುಸ್ತಕ ಸಿದ್ಧ; ಸಚಿವ ಮಧುಬಂಗಾರಪ್ಪ
4. ನಾಲ್ಕು ಸಾವಿರದ 930 ಕೋಟಿ ರೂಪಾಯಿ ಆಸ್ತಿ ತೆರಿಗೆ ಸಂಗ್ರಹಿಸಿದ ಬಿಬಿಎಂಪಿ
5. ಬೆಂಗಳೂರು, ಕರಾವಳಿ ಜಿಲ್ಲೆಗಳು ಸೇರಿದಂತೆ ಹಲವೆಡೆ ಇಂದು ಮಳೆ– ಹವಾಮಾನ ಇಲಾಖೆ ಮುನ್ಸೂಚನೆ

*****************

ಮೈಸೂರು ವಿಶ್ವವಿದ್ಯಾಲಯದಲ್ಲಿ ಸಂವಿಧಾನ ಪೀಠ ಮತ್ತು ಬೆಂಗಳೂರಿನಲ್ಲೂ ಆಂಧ್ರದ ಮಾದರಿಯನ್ನೂ ಮೀರಿದ ಅಂಬೇಡ್ಕರ್ ಪ್ರತಿಮೆ ಸ್ಥಾಪಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ.

ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಆಯೋಜಿಸಿದ್ದ ಸಂವಿಧಾನ ಶಿಲ್ಪಿ, ಮಹಾ ಮಾನವತಾವಾದಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜನ್ಮದಿನೋತ್ಸವ ಉದ್ಘಾಟಿಸಿ ಮಾತನಾಡಿದ ಅವರು ಸಂವಿಧಾನದ ಆಶಯ ಈಡೇರಬೇಕಾದರೆ ಅಸಮಾನತೆ, ಅಸ್ಪೃಶ್ಯತೆ ಅಳಿಯಬೇಕು ಎಂದು ತಿಳಿಸಿದ್ದಾರೆ.

ಬಳಿಕ ಅವರು, ಕೆಪಿಸಿಸಿ ಯ ಭಾರತ್ ಜೋಡೋ ಭವನದಲ್ಲಿ ಆಯೋಜಿಸಿದ್ದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿ, ಬೆಂಗಳೂರಿನಲ್ಲಿ ಅಂಬೇಡ್ಕರ್ ಮ್ಯೂಸಿಯಂ ಸ್ಥಾಪಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ಕಾಂಗ್ರೆಸ್ ಮುಖಂಡರು ಉಪಸ್ಥಿತರಿದ್ದರು.

*****************

ಹುಬ್ಬಳ್ಳಿಯಲ್ಲಿ ಅಪ್ರಾಪ್ತ ಬಾಲಕಿಯ ಮೇಲಿನ ಲೈಂಗಿಕ ದೌರ್ಜನ್ಯ ಮತ್ತು ಹತ್ಯೆ ಪ್ರಕರಣದ ಆರೋಪಿಯ ಎನ್‌ಕೌಂಟರ್ ಬಗ್ಗೆ ರಾಜ್ಯ ಸರ್ಕಾರ ತನಿಖೆಗೆ ಆದೇಶ ನೀಡಿದೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಆರೋಪಿಯನ್ನು ನಿವಾಸಕ್ಕೆ ಕರೆದೊಯ್ದು ಪರಿಶೀಲನೆ ನಡೆಸುತ್ತಿದ್ದಾಗ ಆತ ಪೊಲೀಸರ ಮೇಲೆ ದಾಳಿ ನಡೆಸಿದ್ದ, ಈ ವೇಳೆ ಪೊಲೀಸರು ಆತ್ಮ ರಕ್ಷಣೆಗಾಗಿ ಗುಂಡು ಹಾರಿಸಿದ್ದಾರೆ ಎಂದು ಸಮರ್ಥಿಸಿಕೊಂಡಿದ್ದಾರೆ.

ಇದೇ ವೇಳೆ ರಾಜ್ಯಾದ್ಯಂತ ನಡೆಯುತ್ತಿರುವ ಅಪರಾಧ ಪ್ರಕರಣಗಳಲ್ಲಿ ವಲಸೆ ಕಾರ್ಮಿಕರು ಭಾಗಿಯಾಗುತ್ತಿರುವುದರ ಬಗ್ಗೆ ಪರಿಶೀಲಿಸುವುದಾಗಿ ತಿಳಿಸಿದ್ದಾರೆ.

*****************

ಜಾತಿಗಣತಿ ವಿಚಾರವಾಗಿ ನಾಳೆ ಕಾಂಗ್ರೆಸ್ ಪಕ್ಷದ ಒಕ್ಕಲಿಗ ಸಮುದಾಯದ ಶಾಸಕರ ಜೊತೆ ಚರ್ಚಿಸಿ, ಅಭಿಪ್ರಾಯ ಸಂಗ್ರಹಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸಮಾಜದ ಎಲ್ಲಾ ವರ್ಗದವರಿಗೂ ನ್ಯಾಯ ಒದಗಿಸಲಿದೆ ಎಂದು ಹೇಳಿದ್ದಾರೆ.

ಜಾತಿ ಗಣತಿ ವರದಿ ಜಾರಿಗೆ ತಂದಿರುವುದು ರಾಜ್ಯದ ಜನತೆಗೆ ಖುಷಿ ನೀಡಿದೆ ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ಕೋಲಾರದಲ್ಲಿ ಮಾತನಾಡಿದ ಅವರು, ಈ ವಿಚಾರದಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿದೆ ಎಂದು ದೂರಿದ್ದಾರೆ.

ವರದಿ ಪ್ರಕಾರ 76 ಲಕ್ಷ ಲಿಂಗಾಯತರು, ನಂತರದ ಸ್ಥಾನದಲ್ಲಿ ಮುಸ್ಲಿಮರು ಹಾಗೂ ಒಕ್ಕಲಿಗರು ಇದ್ದಾರೆ. ಈಗಾಗಲೇ ಎಲ್ಲಾ ಸಚಿವರಿಗೂ ವರದಿ ಪುಸ್ತಕ ನೀಡಿದ್ದು, ಇದೇ 17ರಂದು ನಡೆಯುವ ಸಂಪುಟ ಸಭೆಯಲ್ಲಿ ಅಂಗೀಕಾರವಾಗುವ ಸಾಧ್ಯತೆಯಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಜಾತಿ ಗಣತಿ ಬಿಡುಗಡೆಯಾಗಿ ಚರ್ಚೆಯಾಗುತ್ತಿದ್ದು, ಇನ್ನೂ ಅನುಷ್ಠಾನ ಆಗಿಲ್ಲ ಎಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಮಧುಬಂಗಾರಪ್ಪ ಶಿವಮೊಗ್ಗದಲ್ಲಿ ಸ್ಪಷ್ಟಪಡಿಸಿದ್ದಾರೆ.

*****************

ಮುಂದಿನ ಶೈಕ್ಷಣಿಕ ವರ್ಷಕ್ಕೆ ಪಠ್ಯಪುಸ್ತಕ ಸಿದ್ಧವಿದ್ದು, ಇಲಾಖೆಯಿಂದ ಎಲ್ಲಾ ತಯಾರಿ ನಡೆದಿದೆ ಎಂದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಮಧುಬಂಗಾರಪ್ಪ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿ ಮಾತನಾಡಿದ ಅವರು, ದ್ವಿತಿಯ ಪಿಯುಸಿ ಮರು ಪರೀಕ್ಷೆ ಬರೆಯಲು ಎರಡು ಅವಕಾಶ ಇದ್ದು, ಪರೀಕ್ಷಾ ಶುಲ್ಕವನ್ನು ಸರ್ಕಾರದಿಂದಲೇ ಭರಿಸಲಾಗುವುದು ಎಂದು ಹೇಳಿದ್ದಾರೆ.

ಧ್ವನಿ: ಮಧುಬಂಗಾರಪ್ಪ ಸಚಿವ

*****************

ಬಿಬಿಎಂಪಿ ಈ ಬಾರಿ ದಾಖಲೆಯ ಆಸ್ತಿ ಸಂಗ್ರಹ ಮಾಡಿದೆ. ಬಿಬಿಎಂಪಿ ವ್ಯಾಪ್ತಿಯಲ್ಲಿನ ಆಸ್ತಿಗಳಿಂದ 2024-25ನೇ ಸಾಲಿನಲ್ಲಿ 4 ಸಾವಿರದ 930 ಕೋಟಿ ರೂಪಾಯಿ ಆಸ್ತಿ ತೆರಿಗೆ ಸಂಗ್ರಹ ಮಾಡಲಾಗಿದೆ. 2023-24ನೇ ಸಾಲಿಗೆ ಹೋಲಿಸಿದರೆ 2024-25 ನೇ ಸಾಲಿನಲ್ಲಿ ಒಂದು ಸಾವಿರ ಕೋಟಿಗೂ ಅಧಿಕ ಆಸ್ತಿ ತೆರಿಗೆ ಸಂಗ್ರಹಣೆಯಾಗಿದೆ.

ಮಹದೇವಪುರದಲ್ಲಿ ಒಂದು ಸಾವಿರದ 310 ಕೋಟಿ ರೂಪಾಯಿ, ಬೆಂಗಳೂರು ಪೂರ್ವ 834 ಕೋಟಿ, ಬೆಂಗಳೂರು ಪಶ್ಚಿಮ 562 ಹಾಗೂ ಬೊಮ್ಮನಹಳ್ಳಿಯಲ್ಲಿ 490 ಕೋಟಿ ರೂಪಾಯಿ ತೆರಿಗೆ ಸಂಗ್ರಹ ಮಾಡಲಾಗಿದೆ.

ಒಟಿಎಸ್ ಜಾರಿ ಹಾಗೂ ಬಾಕಿ ಆಸ್ತಿ ತೆರಿಗೆಗಳನ್ನು ವಸೂಲಿ ಮಾಡಲು ಅನುಸರಿಸಿದ ಕಾರ್ಯಾಚರಣೆಯ ವಿಧಾನಗಳು ಹಾಗೂ ಮನೆ ಮನೆಗೆ ತೆರಳಿ ತೆರಿಗೆ ವಸೂಲಾತಿ ಮಾಡಿರುವುದರಿಂದ ಆಸ್ತಿ ತೆರಿಗೆ ಸಂಗ್ರಹದಲ್ಲಿ ಗಣನೀಯ ಏರಿಕೆಯಾಗಿದೆ ಎಂದು ಬಿಬಿಎಂಪಿ ಪ್ರಕಟಣೆಯಲ್ಲಿ ತಿಳಿಸಿದೆ.

*****************

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಜನರ ಮೇಲೆ ತೆರಿಗೆ ದಾಳಿ ನಡೆಸುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆಯ ನೀತಿ ವಿರುದ್ಧ ಬಿಜೆಪಿ ಹೋರಾಟ ನಡೆಸುತ್ತಿದೆ. ಬೆಂಗಳೂರಿನಲ್ಲಿ ಕಸ ಹಾಗೂ ಪಾರ್ಕಿಂಗ್‌ಗೆ ಶುಲ್ಕ ವಿಧಿಸಲಾಗುತ್ತಿದೆ ಎಂದು ದೂರಿದ್ದಾರೆ.

ಹುಬ್ಬಳ್ಳಿಯಲ್ಲಿ ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ಹಾಗೂ ಹತ್ಯೆ ನಡೆಸಿದ್ದ ವ್ಯಕ್ತಿಯ ಎನ್‌ಕೌಂಟರ್ ಆಗಿರುವುದು ಉತ್ತಮ ಬೆಳವಣಿಗೆಯಾಗಿದ್ದು, ಇಂತಹ ತಪ್ಪು ಮಾಡಿದವರಿಗೆ ಕಾನೂನು ರೀತಿಯಲ್ಲೇ ಶಿಕ್ಷೆಯಾಗಬೇಕು ಎಂದು ಒತ್ತಾಯಿಸಿದ್ದಾರೆ.

*****************

ರಾಜ್ಯದ ವಿವಿಧೆಡೆ ಇಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಿಸಲಾಯಿತು.

ರಾಜಭವನದಲ್ಲಿ ಅಂಬೇಡ್ಕರ್ ಪುತ್ಥಳಿಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಪುಷ್ಪನಮನ ಸಲ್ಲಿಸಿದರು.

ಮಂಗಳೂರಿನಲ್ಲಿ ನಡೆದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಸಂವಿಧಾನ ಶಿಲ್ಪಿ ಬಾಬಾಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ನೇತೃತ್ವದಲ್ಲಿ ರಚಿಸಲಾದ ಸಂವಿಧಾನ ದೇಶದ ಎಲ್ಲ ಸಮಸ್ಯೆಗಳಿಗೂ ಔಷಧೀಯ ಗ್ರಂಥವಾಗಿದೆ ಎಂದು ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ್ ಅಭಿಪ್ರಾಯಪಟ್ಟಿದ್ದಾರೆ.

ಡಾ. ಬಿ. ಆರ್. ಅಂಬೇಡ್ಕರರ ತತ್ವಾದರ್ಶಗಳು ಇಡೀ ವಿಶ್ವಕ್ಕೆ ಪ್ರಸ್ತುತವಾಗಿವೆ ಎಂದು ಕೈಗಾರಿಕೆ, ಮೂಲಸಭೌಲಭ್ಯ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ್ ವಿಜಯಪುರದಲ್ಲಿ ಹೇಳಿದ್ದಾರೆ.

ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆಲೋಚನೆಗಳನ್ನು ಎಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದು ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್ ರಾಜಣ್ಣ ಕರೆ ನೀಡಿದ್ದಾರೆ.

ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ "ಶಿಕ್ಷಣ-ಸಂಘಟನೆ-ಹೋರಾಟ" ಎಂಬ ಮೂರು ಸಿದ್ಧಾಂತಗಳನ್ನು ನಾವೆಲ್ಲರೂ ಪಾಲಿಸಬೇಕಾದ ಜೀವನದ ಮಂತ್ರವಾಗಿವೆ ಎಂದು ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ತಿಳಿಸಿದ್ದಾರೆ.

ಯಾರೊಬ್ಬರೂ ಅಪಸ್ವರ ಎತ್ತದಂತಹ ಶ್ರೇಷ್ಠ ಸಂವಿಧಾನವನ್ನು ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರಚಿಸಿದ್ದಾರೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅಭಿಪ್ರಾಯಪಟ್ಟಿದ್ದಾರೆ.

ಬೆಳಗಾವಿಯಲ್ಲಿ ಇಂದು ಅಂಬೇಡ್ಕರ್ ಜಯಂತಿ ಪ್ರಯುಕ್ತ ಅಂಬೇಡ್ಕರ್ ಮೂರ್ತಿಗೆ ಮಹಾಪೌರರು ಹಾಗೂ ಉಪ ಮಹಾಪೌರರು ಜಿಲ್ಲಾಧಿಕಾರಿಗಳು ಮಾಲಾರ್ಪಣೆ ಮಾಡುವ ಮೂಲಕ ಜಯಂತಿಗೆ ಚಾಲನೆ ನೀಡಿದರು.

ಅಂಬೇಡ್ಕರ್ ಉದ್ಯಾನವನದಲ್ಲಿ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ, ಜಗದೀಶ್ ಶೆಟ್ಟರ್ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ **134** ನೇ ಜನ್ಮ ದಿನದ ಸ್ಮರಣಾರ್ಥ ದಾವಣಗೆರೆಯಲ್ಲಿ **20** ಕೋಟಿ ರೂಪಾಯಿ ವೆಚ್ಚದಲ್ಲಿ ಅಂಬೇಡ್ಕರ್ ಭವನ ನಿರ್ಮಾಣ ಮಾಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಹೇಳಿದ್ದಾರೆ.

ಧ್ವನಿ: ಎಸ್.ಎಸ್.ಮಲ್ಲಿಕಾರ್ಜುನ್, ಸಚಿವ ( ಸೆಕೆಂಡ್ಸ್)

ಭೂಮಿಯ ಮೇಲೆ ಸೂರ್ಯ ಚಂದ್ರರು ಇರುವವರೆಗೂ ಡಾ.ಬಿ.ಆರ್.ಅಂಬೇಡ್ಕರ್ ಅವರ ಹೆಸರು ಶಾಶ್ವತವಾಗಿ ಇರಲಿದೆ ಎಂದು ಕಾರ್ಮಿಕ ಇಲಾಖೆ ಸಚಿವ ಸಂತೋಷ ಲಾಡ್ ಧಾರವಾಡದಲ್ಲಿ ಅಭಿಪ್ರಾಯಪಟ್ಟಿದ್ದಾರೆ.

*****************

ರಾಜ್ಯದ ಒಳನಾಡಿನ ಕೆಲವೆಡೆ ಮಳೆಯಾಗಿದೆ. ಬೆಂಗಳೂರಿನಲ್ಲಿ ಮೋಡಕವಿದ ವಾತಾವರಣವಿದ್ದು ಇಂದು ಕೆಲವೆಡೆ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ನಿರ್ದೇಶಕ ಡಾ.ಸಿ.ಎಸ್.ಪಾಟೀಲ್ ಸೂಚನೆ ನೀಡಿದ್ದಾರೆ.

ದಕ್ಷಿಣ ಕನ್ನಡ, ಉತ್ತರಕನ್ನಡ, ಉಡುಪಿ ಜಿಲ್ಲೆಯ ಒಂದೆರಡು ಕಡೆ ಮಳೆಯಾಗಲಿದೆ. ಹಾವೇರಿ, ಚಿಕ್ಕಮಗಳೂರು, ಕೊಡಗು, ಕೋಲಾರ ಜಿಲ್ಲೆಗಳಲ್ಲೂ ಮಳೆಯಾಗಲಿದೆ.

ಧ್ವನಿ: ಸಿ.ಎಸ್.ಪಾಟೀಲ್, ಹವಾಮಾನ ಇಲಾಖೆ ನಿರ್ದೇಶಕ

********ಮುಕ್ತಾಯ********